## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021-22 ನೇ ಸಾಲಿನಲ್ಲಿ ಯಾದಗಿರಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು

**ಓದಲಾಗಿದೆ:**

1. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 355 ವೆಚ್ಚ-6/2021, ದಿನಾಂಕ: 20.07.2021 .
2. ಮಾನ್ಯ ಗ್ರಾಮೀಣಾಭೀವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಅನುಮೋದಿಸಿದಂತೆ
3. ಸರ್ಕಾರದ ಪತ್ರ ಸಂ: ಗ್ರಾಅಪ 42 (35) ಆರ್‌ಆರ್‌ಸಿ 2021, ದಿನಾಂಕ: 27.07.2021
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಯಾದಗಿರಿ ರವರ ಪತ್ರ ಸಂ: ಜಿಪಂಯಾ/ರಸ್ತೆ/ದುರಸ್ತಿ/5054/ ಪಿ.ಆರ್.ಇ.ಡಿ/2021-22 ದಿ: 21.01.2021

******

**ಪ್ರಸ್ತಾವನೆ:**

2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ 5054 ರಡಿ ಯಾದಗಿರಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 1.60 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳಲು ಪ್ರಸ್ತಾವನೆಯನ್ನು ಗಮನಿಸಿದೆ.

ಓದಲಾದ -1 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಯಾದಗಿರಿ ಮತ್ತು ಕಲಬುರ್ಗಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ದಿಪಡಿಸಲು ರೂ. 5.00 ಕೋಟಿಗಳನ್ನು ಹಂಚಿಕೆ ಮಾಡಲು ಆದೇಶಿಸಿರುವ ಮೇರೆಗೆ ಆರ್ಥಿಕ ಇಲಾಖೆಯು ಕಾಮಗಾರಿಗಳು ರೂ. 5.00 ಕೋಟಿಗಳ ಮೊತ್ತದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸಹಮತಿಸಿರುತ್ತದೆ.

ಓದಲಾದ -2 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಆರ್ಥಿಕ ಇಲಾಖೆಯು ಯಾದಗಿರಿ ಮತ್ತು ಕಲಬುರ್ಗಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿ ಪಡಿಸಲು ರೂ. 5.00 ಕೋಟಿಗಳನ್ನು ಹಂಚಿಕೆ ಮಾಡಿರುವುದನ್ನು ಅನುಮೋದಿಸಿದ್ದು, ಸದರಿ ಅನುದಾನಕ್ಕೆ ಮಾನ್ಯ ವಿಧಾನ ಪರಿಷತ್ ಸದಸ್ಯರು, ಯಾದಗಿರಿ ಮತ್ತು ಕಲಬುರ್ಗಿ ಜಿಲ್ಲೆ ರವರೊಂದಿಗೆ ಸಮಾಲೋಚಿಸಿ ಕಾಮಗಾರಿಗಳ ವಿವರಗಳನ್ನು ಪಡೆದು ಷರತ್ತುಬದ್ಧವಾಗಿ ನಿಯಮಾನುಸಾರ ಪರಿಶೀಲಿಸಿ ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸಲು ಓದಲಾದ-3 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಯಾದಗಿರಿ ಮತ್ತು ಕಲಬುರ್ಗಿ ಜಿಲ್ಲಾ ಪಂಚಾಯತಿರವರನ್ನು ಕೋರಲಾಗಿತ್ತು.

ಓದಲಾದ-4 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಯಾದಗಿರಿ ಜಿಲ್ಲಾ ಪಂಚಾಯತಿರವರು ಯಾದಗಿರಿ ಜಿಲ್ಲಾ ವ್ಯಾಪ್ತಿಯ ರೂ. 1.60 ಕೋಟಿಗಳ ಮೊತ್ತದ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಕ್ರಿಯಾ ಯೋಜನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ 2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ 5054 ರಡಿ ಯಾದಗಿರಿ ಜಿಲ್ಲಾ ವ್ಯಾಪ್ತಿಯ ಕೆಳಕಂಡ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 1.60 ಕೋಟಿಗಳ ಮೊತ್ತದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ :42(30)-5 ಆರ್‌ಆರ್‌ಸಿ 2021 (ಇ-531095), ಬೆಂಗಳೂರು, ದಿನಾಂಕ: 17.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2021-22 ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 5054 ರಡಿ ಯಾದಗಿರಿ ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ. 1.60 ಕೋಟಿಗಳ (ಒಂದು ಕೋಟಿ ಅರವತ್ತು ಲಕ್ಷ ರೂಪಾಯಿಗಳು ಮಾತ್ರ) ಮೊತ್ತದಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

I/222350/2022

| ಕ್ರ.ಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | ಗುರುಮಿಠಕಲ್ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಚಿಂತನಳ್ಳಿ ಗ್ರಾಮದ ಶ್ರೀ ನರಸಪ್ಪ ದಿಡ್ಡಿಕೇರಿ ದೇವಿಂದ್ರಪ್ಪ ಕೃಷ್ಣಾಪುರ ವರೆಗೆ ರಸ್ತೆ ಸುಧಾರಣೆ | 7.00 |
| 2 | ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶೆಟ್ಟಿಗೇರಾ ಗ್ರಾಮದ ಶ್ರೀ ಭೀಮರಾಯ ಕುರಾಳ ಮನೆಯಿಂದ ಸೈಬಣ್ಣ ಬೈಂಬಯಿ ಎಸ್.ಸಿ.ಮನೆಯವರೆಗೆ ರಸ್ತೆ ಸುಧಾರಣೆ | 7.00 |
| 3 | ಶಹಾಪೂರ ತಾಲ್ಲೂಕು ಶಹಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಉಳ್ಳೆಸೂಗೂರ ಗ್ರಾಮದಿಂದ ಮಾಲಹಳ್ಳಿಯವರೆಗೆ ರಸ್ತೆ ಸುಧಾರಣೆ | 10.00 |
| 4 | ಶಹಾಪೂರ ತಾಲ್ಲೂಕು ಶಹಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬಿರನೂರ ಗ್ರಾಮದ ಪ್ರೌಢ ಶಾಲೆಯಿಂದ ಕಾಮರೆಡ್ಡಿ ಹೊಲದವರೆಗೆ ರಸ್ತೆ ಸುಧಾರಣೆ | 10.00 |
| 5 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಆನೂರ-ಬಿ ಗ್ರಾಮದ ಮಾಶಮ್ಮ ಮನೆಯಿಂದ ದರ್ಗಾ ವರೆಗೆ ರಸ್ತೆ ಸುಧಾರಣೆ | 7.00 |
| 6 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ (ಅಮ್ಮಾಪಲ್ಲಿ) ಗ್ರಾಮದಿಂದ ಧರ್ಮಾಪುರಕ್ಕೆ ಹೋಗುವ ದಾರಿಗೆ ರಸ್ತೆ ಸುಧಾರಣೆ | 7.00 |
| 7 | ಸುರಪುರ ತಾಲ್ಲೂಕು ಸುರಪುರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಗೌಡಗೇರಾ ಗ್ರಾಮದಿಂದ ಮಾಲಗತ್ತಿ ಹೋಗುವ ರಸ್ತೆ ಸುಧಾರಣೆ | 10.00 |
| 8 | ಶಹಾಪೂರ ತಾಲ್ಲೂಕು ಶಹಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಶಿರವಾಳ ಗ್ರಾಮದಿಂದ ಮಾಡಬೂಳ ವಾಯಾ ಶುಜ್ಞಾನೇಶ್ವರ ದೇವಸ್ಥಾನಕ್ಕೆ ಹೋಗುವ ರಸ್ತೆ ಸುಧಾರಣೆ | 10.00 |
| 9 | ಯಾದಗಿರ ತಾಲ್ಲೂಕು ವಡಗೇರಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಐಕೂರ ಗ್ರಾಮದ ಶ್ರೀ ಹನುಮಾನ ದೇವಸ್ಥಾನದಿಂದ ಮರಗೆಮ್ಮ ದೇವಸ್ಥಾನದವರೆಗೆ ರಸ್ತೆ ಸುಧಾರಣೆ | 10.00 |
| 10 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯರಗೋಳ ಗ್ರಾಮದ ಲಿಂಗಸನಹಳ್ಳಿಯಿಂದ ಯರಗೋಳ ಸಂಪರ್ಕ ರಸ್ತೆ ಸುಧಾರಣೆ | 7.00 |
| 11 | ಶಹಾಪೂರ ತಾಲ್ಲೂಕು ಶಹಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಾರ್ಡ ನಂ. 8ರ ಮರಿರಾಜ ಮನೆಯಿಂದ ಜೀವನರಾವ ಕುಲಕರ್ಣಿ ಮನೆಯವರೆಗೆ ರಸ್ತೆ ಸುಧಾರಣೆ | 7.00 |
| 12 | ಯಾದಗಿರಿ ತಾಲ್ಲೂಕು ಯಾದಗಿರಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನಗರದ ಶ್ರೀ ಮಾತಾ ಮಾಣಿಕೇಶ್ವರಿ ಕಾಲೋನಿಯಲ್ಲಿ ಶ್ರೀ ಹನುಮಾನ ದೇವಸ್ಥಾನದಿಂದ ಶ್ರೀಮತಿ ಲಲಿತಮ್ಮ ಶರಣಪ್ಪ ಮನೆಯವರೆಗೆ ರಸ್ತೆ ಸುಧಾರಣೆ | 10.00 |
| 13 | ಶಹಾಪೂರ ತಾಲ್ಲೂಕು ಶಹಾಪೂರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಇಬ್ರಾಹಿಂಪುರ ಗ್ರಾಮದ ಲಾಲಸಾಬ ಮನೆಯಿಂದ ದೇವಪ್ಪ ಟೋಪಗಿ ಮನೆಯವರೆಗೆ ರಸ್ತೆ ಸುಧಾರಣೆ | 10.00 |
| 14 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಂಪೂರ ಗ್ರಾಮದಿಂದ ರಾಚನಳ್ಳಿ ಹಳ್ಳಿಗೆ ಹೋಗುವ ರಸ್ತೆ ಸುಧಾರಣೆ | 7.00 |
| 15 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನಂದೇಪಲ್ಲಿ ಗ್ರಾಮದಿಂದ ಯಳಸತ್ತಿ ಗ್ರಾಮಕ್ಕೆ ಹೋಗುವ ರಸ್ತೆ ಸುಧಾರಣೆ | 7.00 |
| 16 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಂಪುರ ಕೆ ಗ್ರಾಮದಿಂದ ಕಣೆಕಲ್ ಗ್ರಾಮಕ್ಕೆ ಹೋಗುವ ರಸ್ತೆ ಸುಧಾರಣೆ | 7.00 |

I/222350/2022

| | | |
|---|---|---|
| | | |
| 17 | ಗುರುಮಿಠಕಲ್ ತಾಲ್ಲೂಕು ಗುರುಮಿಠಕಲ್ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನಂದೆಪಲ್ಲಿ ಗ್ರಾಮದಿಂದ ತೊರಣತಿಪ್ಪ ಗ್ರಾಮಕ್ಕೆ ಹೋಗುವ ರಸ್ತೆ ಸುಧಾರಣೆ | 7.00 |
| 18 | ಸುರಪುರ ತಾಲ್ಲೂಕು ಹುಣಸಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಜನಕೊಳ್ಳುರ ಗ್ರಾಮದಲ್ಲಿ ಸಿ.ಸಿ. ರಸ್ತೆ ನಿರ್ಮಾಣ | 20.00 |
| ಒಟ್ಟು | | **160.00** |

ಷರತ್ತುಗಳು:

1. ಈ ಮೇಲಿನ 18 ರಸ್ತೆ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತಿ /ಕೆಆರ್‌ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
2. ಈ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮೂಲಕ ಅನುಷ್ಠಾನ ಮಾಡತಕ್ಕದ್ದು.
3. ಈ ಮೇಲಿನ 18 ಕಾಮಗಾರಿಗಳು ಡಿಆರ್‌ಆರ್‌ಪಿ ಪಟ್ಟಿಯಲ್ಲಿದ್ದು ಮತ್ತು ಅಭಿವೃದ್ಧಿ ಪಡಿಸಲು ಅರ್ಹವಾಗಿರುವುದನ್ನು ಖಚಿತಪಡಿಸಿಕೊಂಡು ರಸ್ತೆಯ ಉದ್ದ ಹಾಗೂ ಸೇತುವೆಗಳ ಅವಶ್ಯವಿರುವುದನ್ನು ಸ್ಥಳ ಪರಿಶೀಲನೆ ಮಾಡಿಕೊಂಡು, ವಾಸ್ತವಿಕವಾಗಿ ಪ್ರತಿ ಕಾಮಗಾರಿಗೆ ಬೇಕಾಗಿರುವ ವೆಚ್ಚಕ್ಕೆ ತಕ್ಕಂತೆ ಅಂದಾಜು ಪಟ್ಟಿಯನ್ನು ತಯಾರಿಸಿಕೊಂಡು ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯನ್ನು ಪಡೆಯತಕ್ಕದ್ದು
4. ಡಿಪಿಆರ್‌ನ್ನು ತಯಾರಿಸುವಾಗ ಪ್ರತಿ ಕಿ.ಮೀ.ಗೆ ತಗಲುವ ವೆಚ್ಚದ ಮಾಹಿತಿಯನ್ನು ನಮೂದಿಸುವುದು.
5. ಈ ಆದೇಶದಲ್ಲಿ ಕಾಮಗಾರಿಗಳನ್ನು ಸ್ಥಳ ಪರಿಶೀಲಿಸಿ ವಾಸ್ತವಿಕಾವಾಗಿ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿದ ನಂತರ ಉಳಿಕೆಯಾದ ಅನುದಾನದ ಬಗ್ಗೆ ಸರ್ಕಾರಕ್ಕೆ ಕಡ್ಡಾಯವಾಗಿ ವರದಿ ಸಲ್ಲಿಸತಕ್ಕದ್ದು.
6. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರೆ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯುತಕ್ಕದ್ದು.
7. ಡಿಪಿಆರ್ ತಯಾರಿಸುವಾಗ ಪ್ರತಿ 100.00 ಮೀ.ಗಳ ಛಾಯಾಚಿತ್ರವನ್ನು ಅಳವಡಿಸುವುದು ಕಡ್ಡಾಯವಾಗಿರುತ್ತದೆ.
8. ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ (ಕೆಟಿಪಿಪಿ) ಪ್ರಕಾರ ಟೆಂಡರ್ ಕರೆದು ಅನುಷ್ಠಾನ ಮಾಡತಕ್ಕದ್ದು.
9. ಪ್ರಸ್ತುತ ಈ ಲೆಕ್ಕ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸುತ್ತಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಕಾಮಗಾರಿಗಳ ಪೂರ್ಣ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ವೆಬ್ ಸೈಟ್‌ನಲ್ಲಿ ತಪ್ಪದೇ ಅಳವಡಿಸುವುದು.
10. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಛಾಯಾಚಿತ್ರಗಳನ್ನು ತೆಗೆದು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸತಕ್ಕದ್ದು.

11. ಕಾಮಗಾರಿಗಳನ್ನು 3rd party/SQM/DQM ರವರಿಂದ Three tire ತಪಾಸಣೆಗೆ ಒಳಪಡಿಸತಕ್ಕದ್ದು.

12. ಎಲ್ಲಾ ಕಾಮಗಾರಿಗಳ ಪ್ರಗತಿ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಮಾಡತಕ್ಕದ್ದು.

13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರು ಪ್ರತಿ ಮಾಹೆ ನಡೆಸುವ ಎಂಪಿಕ್ ಸಭೆಯಲ್ಲಿ ಸದರಿ ಅನುದಾನದ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಪರಿಶೀಲಿಸುವುದು.

14. ತಾಲ್ಲೂಕುವಾರು ಪ್ರಗತಿಯ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಯವರಿಂದ ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ ಇವರಿಗೆ ಮಾಹಿತಿಗಾಗಿ ಸಲ್ಲಿಸುವುದು.

15. ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 355 ವೆಚ್ಚ-6/2021, ದಿನಾಂಕ: 20.07.2021 ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Signed by Ramesh .d.o
Date: 17-02-2022 11:36:36

(ರಮೇಶ್ ಡಿ.ಓ)
ಉಪ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ
ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡಮ ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ , ವಿಧಾನಸೌಧ, ಬೆಂಗಳೂರು
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಯಾದಗಿರಿ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು

18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ